## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಂ.ನಾಗರಾಜು ರವರ ಶೂನ್ಯ ವೇಳೆಯ ಪ್ರಸ್ತಾವಕ್ಕೆ ಉತ್ತರ.

ಪ್ರಶ್ನೆ : ದಿನಾಂಕ:06/12/2023 (ಬುಧವಾರ) ರ ಸಂಜೆ ವಾಣಿ ದಿನಪತ್ರಿಕೆಯಲ್ಲಿ "ಬೆಂಗಳೂರು ಅಪರಾಧಿಗಳ ನಗರ" ಎಂಬ ವಿಚಾರವು ವರದಿಯಾಗಿರುತ್ತದೆ.

ಭಾರತದ ಮಹಾನಗರಗಳಿಗೆ ಹೋಲಿಸಿದರೆ ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿ 2022 ರಲ್ಲಿ, ಪ್ರತಿ ಗಂಟೆಗೆ ವಿವಿಧ ರೀತಿಯ ಕನಿಷ್ಠ ಐದು ಅಪರಾಧಗಳು ದಾಖಲಾಗಿವೆ. ಅದರಲ್ಲಿ ಮೂರು ಕ್ರಿಮಿನಲ್ ಮತ್ತು ಉಳಿದವು ವಿಶೇಷ ಸ್ಥಳೀಯ ಕಾನೂನುಗಳ ಅಡಿಯಲ್ಲಿ ದಾಖಲಾಗಿದೆ. ಈ ವರದಿ ಅನ್ವಯ ಭಾರತದ ಐಟಿಹಬ್ ಎಂದು ಹೆಸರು ಪಡೆದ ಬೆಂಗಳೂರು ಇದೀಗ ಅಪರಾಧಿಗಳ ನಗರವಾಗಿದೆ. ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ವರದಿಯಂತೆ 2022 ರಲ್ಲಿ ಅಪರಾಧಗಳ ಪ್ರಮಾಣ 27% ರಷ್ಟು ಬೆಂಗಳೂರಿನಲ್ಲಿ ಹೆಚ್ಚಿದೆ. 2021 ರಲ್ಲಿ 36,310 ವಿವಿಧ ಅಪರಾಧ ಪ್ರಕರಣ ದಾಖಲಾದರೆ 2022 ರಲ್ಲಿ ಇದು 46,187ಕ್ಕೆ ತಲುಪಿದೆ.

ಮುಂದುವರೆದು, 2020 ರಲ್ಲಿ, ಇದು 34,156 ರಷ್ಟಿದೆ. ಐಪಿಸಿ ಅಪರಾಧಗಳು ಎಸ್‌ಎಲ್‌ಎಲ್ ಅಪರಾಧ ಪ್ರಕರಣಗಳು ಗಣನೀಯವಾಗಿ ಹೆಚ್ಚಿದೆ. ಬೆಂಗಳೂರಿನ ಐಪಿಸಿ ಅಪರಾಧಗಳಲ್ಲಿ, 2022 ರಲ್ಲಿ ಪ್ರತಿ ಐದು ದಿನಗಳಿಗೊಮ್ಮೆ ಎರಡು ಅತ್ಯಾಚಾರಗಳು, ಪ್ರತಿ ಎರಡನೇ ದಿನಕ್ಕೆ ಒಂದು ಕೊಲೆ ಮತ್ತು ದಿನಕ್ಕೆ ಕನಿಷ್ಠ ಒಂದು ಕೊಲೆ ಯತ್ನ ನಡೆದಿವೆ ಎಂದು ವರದಿ ತಿಳಿಸಿದೆ. ಮಹಿಳೆಯರ ವಿರುದ್ಧದ ಇತರೆ ಅಪರಾಧಗಳು ಹೆಚ್ಚು, ಪ್ರತಿ ದಿನ ಮಹಿಳೆಯರೊಂದಿಗೆ ಅಶ್ಲೀಲ ಪ್ರಕರಣಗಳು, ಪ್ರತಿ ದಿನ ಒಂದಕ್ಕಿಂತ ಹೆಚ್ಚು ಮಹಿಳೆಯರು ಬೆಂಗಳೂರಿನಲ್ಲಿ ಹಲ್ಲೆಗೊಳಗಾಗಿದ್ದಾರೆ ಎಂಬ ಸುದ್ದಿ ಕುರಿತು ಪರಿಣಾಮಕಾರಿಯಾದ ಕ್ರಮಗಳನ್ನು ಕೈಗೊಳ್ಳಬೇಕೆಂದು ಮಾನ್ಯ ಗೃಹ ಸಚಿವರನ್ನು ಒತ್ತಾಯಿಸುತ್ತೇನೆ.

***

**ಉತ್ತರ: ಬೆಂಗಳೂರು ನಗರದಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾಗಿರುವ ಐಪಿಸಿ ಮತ್ತು ಎಸ್.ಎಲ್.ಎಲ್ ಪ್ರಕರಣಗಳ ಅಂಕಿ-ಅಂಶಗಳ ವಿವರಗಳು ಕೆಳಕಂಡಂತಿದೆ.**

**IPC & SLL cases reported in Bengaluru city during the last 3 years.**

| Year | IPC | SLL | Total |
|---|---|---|---|
| 2020 | 19964 | 14192 | 34156 |
| 2021 | 21548 | 14762 | 36310 |
| 2022 | 28666 | 17521 | 46187 |
| 2023 | 38132 | 24888 | 63020 |

| Comparative Crime statement of Important cases reported in Bengaluru city during the last 3 years. | | | | |
|---|---|---|---|---|
| **Year** | **Murder** | **Rape** | **Attempt to Murder** | **Crime against Women** |
| 2020 | 179 | 108 | 502 | 2730 |
| 2021 | 155 | 117 | 371 | 3127 |
| 2022 | 173 | 151 | 389 | 3924 |
| 2023 | 193 | 158 | 501 | 4184 |

**ಬೆಂಗಳೂರು ನಗರದಲ್ಲಿ ಅಪರಾಧ ಕೃತ್ಯಗಳನ್ನು ಕಡಿವಾಣ ಹಾಕಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:**

- ನಗರದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಬೀಟ್ ವ್ಯವಸ್ಥೆ ಮಾಡಲಾಗಿದೆ ಹಾಗೂ ಸದರಿ ಬೀಟ್‌ಗಳಿಗೆ ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಿ, ಯಾವುದೇ ಅಪರಾಧ ಕೃತ್ಯಗಳು ಜರುಗದಂತೆ ನಿಗಾವಹಿಸಲಾಗುತ್ತಿದೆ. ಒಂದು ವೇಳೆ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ಕರ್ತವ್ಯ ನಿರ್ಲಕ್ಷತೆಯಿಂದಾಗಿ ಅಪರಾಧ ಕೃತ್ಯಗಳು ಜರುಗಲು ಕಾರಣವಾಗಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲಾಗುತ್ತಿದೆ.

- ನಗರದಲ್ಲಿ ಸೈಬರ್ ಅಪರಾಧ ಕೃತ್ಯಗಳು ಹೆಚ್ಚಾಗಿದ್ದು, ಈ ಸೈಬರ್ ಕೃತ್ಯಗಳನ್ನು ತಡೆಗಟ್ಟುವ ಸಂಬಂಧ ಈ ಹಿಂದೆ ವಿಭಾಗದ ಮಟ್ಟದಲ್ಲಿ ಒಂದು ಸೆನ್ ಪೊಲೀಸ್ ಠಾಣೆಯನ್ನು ತೆರೆದಿದ್ದು, ಪ್ರಸ್ತುತ ಸೈಬರ್ ಅಪರಾಧ ಹೆಚ್ಚಾದ ಹಿನ್ನೆಲೆಯಲ್ಲಿ ಪ್ರತೀ ಠಾಣೆಯಲ್ಲಿ ಸೆನ್ ಅಪರಾಧಗಳನ್ನು ದಾಖಲಿಸಿಕೊಂಡು ನೊಂದ ವ್ಯಕ್ತಿಗಳಿಗೆ ನ್ಯಾಯ ದೊರಕಿಸಿಕೊಡಲು ಶ್ರಮಿಸಲಾಗುತ್ತಿದೆ.

- ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 267 ಎಸ್‌ಎಸ್‌ಟಿ 2018, ದಿನಾಂಕ: 28.09.2018 ರಲ್ಲಿ ನೀಡಿರುವ ಪ್ರದತ್ತವಾದ ಅಧಿಕಾರದನ್ವಯ ಮತ್ತು ಪದೇ ಪದೇ ಅಪರಾಧ ಕೃತ್ಯಗಳಲ್ಲಿ ತೊಡಗಿರುವ ರೌಡಿಗಳ ಬಗ್ಗೆ ನಿಗಾವಹಿಸಿ ಅವರುಗಳ ವಿರುದ್ಧ ಸ್ವಯಂ ಪ್ರೇರಿತ (Suo-moto) ಪ್ರಕರಣವನ್ನು ದಾಖಲಿಸಿ ಗಡಿಪಾರು ಮಾಡುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

- ನಗರದ ಎಲ್ಲಾ ಪ್ರದೇಶಗಳಲ್ಲಿ ಸುಸಜ್ಜಿತವಾದ ಗಸ್ತು ಕರ್ತವ್ಯವನ್ನು ನಿರ್ವಹಿಸಲು ನಗರದಲ್ಲಿ ಒಟ್ಟು 241 ಹೊಯ್ಸಳ ವಾಹನವನ್ನು ಮತ್ತು 1954 ದ್ವಿ–ಚಕ್ರ ಚೀತಾ ವಾಹನಗಳನ್ನು ನಿಯೋಜಿಸಲಾಗಿದೆ. ಈ ಮೂಲಕ ನಗರದ ಯಾವುದೇ ಸ್ಥಳದಿಂದ 112 ಸಂಖ್ಯೆಗೆ ಕರೆಮಾಡಿ 07 ನಿಮಿಷಗಳ ಒಳಗಾಗಿ ಆ ಸ್ಥಳವನ್ನು ತಲುಪಿ ನೊಂದ ವ್ಯಕ್ತಿಗೆ ನ್ಯಾಯಕೊಡಿಸುವ ಹಾಗೂ ಅಪರಾಧ ಕೃತ್ಯವನ್ನು ತಡೆಯುವ ಯೋಜನೆಯನ್ನು ರೂಪಿಲಾಗಿದೆ.

- ಪ್ರತಿ ಠಾಣೆಗಳಲ್ಲಿ ಜನಸ್ನೇಹಿ ಸಂಪರ್ಕ ಕೇಂದ್ರಗಳನ್ನು ತೆರೆದಿದ್ದು, ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜನಸ್ನೇಹಿ ಸಭೆಗಳನ್ನು ನಡೆಸಿ, ಅವರಿಗೆ ಅಪರಾಧ ಕೃತ್ಯಗಳ ಬಗ್ಗೆ ಅರಿವು ಮೂಡಿಸಿ, ಅಲ್ಲಿನ ಭಾತ್ಮೀದಾರರ ಮೂಲಕ ಅಪರಾಧ ಕೃತ್ಯಗಳ ಬಗ್ಗೆ ಆರೋಪಿಗಳ ಬಗ್ಗೆ ಹಾಗೂ ಅಲ್ಲಿನ

ಆಗುಹೋಗುಗಳ ಬಗ್ಗೆ ಮಾಹಿತಿ ಸಂಗ್ರಹಿಸಿ, ಶಾಂತಿ ಸುವ್ಯವಸ್ಥೆಯನ್ನು ಕಾಪಾಡಲು ಕ್ರಮವಹಿಸಲಾಗುತ್ತಿದೆ.

- ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿ ಶಾಂತಿ ಸುವ್ಯವಸ್ಥೆಯನ್ನು ಹಾಳು ಮಾಡುವವರ ವಿರುದ್ಧ ಗೂಂಡಾ ಕಾಯ್ದೆ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿ, ಅವರುಗಳು ಇತರೆ ಅಪರಾಧಿಗಳೊಂದಿಗೆ ಸೇರಿ ನಡೆಸುವ ಕೃತ್ಯಗಳ ಬಗ್ಗೆ ಹಾಗೂ ಚಲನವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.

- ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ಹಾಗೂ ಅತ್ಯಾಚಾರದಂತಹ ಕೃತ್ಯಗಳನ್ನು ತಡೆಗಟ್ಟುವ ಸಲುವಾಗಿ ಗಸ್ತು ವ್ಯವಸ್ಥೆಯನ್ನು ಬಿಗಿಗೊಳಿಸಿದ್ದು, ಹಗಲು ಮತ್ತು ರಾತ್ರಿ ವೇಳೆ ಗಸ್ತು ಕರ್ತವ್ಯಕ್ಕೆ ನೇಮಕ ಮಾಡುವಾಗ ಸಿಬ್ಬಂದಿಯವರುಗಳಿಗೆ ಮಹಿಳೆಯರು ಮತ್ತು ಹೆಣ್ಣು ಮಕ್ಕಳು ಯಾವುದೇ ರೀತಿ ಸಮಸ್ಯೆಗಳನ್ನು ತಿಳಿಸಿದ್ದಲ್ಲಿ ಕೂಡಲೇ ಆ ಬಗ್ಗೆ ಠಾಣಾಧಿಕಾರಿಗಳಿಗೆ ಹಾಗೂ ಠಾಣಾ ಸರಹದ್ದಿನಲ್ಲಿ ಗಸ್ತಿನಲ್ಲಿರುವ ಅಧಿಕಾರಿಗಳಿಗೆ ವಿಷಯವನ್ನು ತಿಳಿಸಿ ತ್ವರಿತವಾಗಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಸಮಸ್ಯೆಗಳನ್ನು ಕಾನೂನಿನ ಅಡಿಯಲ್ಲಿ ಬಗೆಹರಿಸಿ ಸಮಸ್ಯೆಗಳನ್ನು ಪರಿಹರಿಸಿಕೊಡುವಂತೆ ತಿಳುವಳಿಕೆ ನೀಡಲಾಗಿದೆ.

- ಮಹಿಳೆಯರ ರಕ್ಷಣೆಗಾಗಿ ಸೇಫ್ ಸಿಟಿ ಪ್ರಾಜೆಕ್ಟ್‌ನ ಅಡಿಯಲ್ಲಿ 7500 ಸಿ.ಸಿ.ಟಿವಿ ಗಳನ್ನು ಅಳವಡಿಸಲಾಗಿದೆ ಹಾಗೂ ಅವರ ನೆರವಿಗಾಗಿ 24/7 ಸಮಯಕಾಲ ಸ್ಪಂದಿಸಲು **'ಕಮಾಂಡ್ ಸೆಂಟರ್'** ಅನ್ನು ತೆರೆದಿದ್ದು, ಸದರಿ ಕಮಾಂಡ್ ಸೆಂಟರ್‌ನಲ್ಲಿ ನುರಿತ ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸಲಾಗಿರುತ್ತದೆ. ಈ ಮೂಲಕ ನಗರದ ಯಾವುದೇ ಭಾಗದಿಂದ ಮಹಿಳೆಯರು ತೊಂದರೆಗೆ ಒಳಗಾಗಿ 112 ಸಂಖ್ಯೆಗೆ ಕರೆ ಮಾಡಿದಾಗ ತಕ್ಷಣ ನೆರವು ನೀಡಲು ಶ್ರಮಿಸಲಾಗುತ್ತಿದೆ.

- ಮಹಿಳೆಯರು ರಸ್ತೆ ಬದಿಗಳಲ್ಲಿ ಪ್ರಾಕೃತಿಕ ತೊಂದರೆಗೆ ಒಳಗಾದಾಗ ಅವರಿಗೆ ನೆರವಾಗುವ ಉದ್ದೇಶದಿಂದ **'ನೆರವು ಕಂಟೈನರ್'**ಗಳನ್ನು ಸ್ಥಾಪನೆ ಮಾಡಲಾಗಿದೆ. ಇದರಿಂದ ತೊಂದರೆಗೆ ಒಳಗಾದ ಮಹಿಳೆಯರು ನೆರವು ಕಂಟೈನರ್‌ನಲ್ಲಿ ರಕ್ಷಣೆಯನ್ನು ಪಡೆಯಬಹುದಾಗಿರುತ್ತದೆ.

- ರಾತ್ರಿ ವೇಳೆಯಲ್ಲಿ ಹಾಗೂ ನಿರ್ಜನ ಪ್ರದೇಶಗಳಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳು ಸಂಚರಿಸಬೇಕಾದ ಸಂದರ್ಭ ಬಂದಲ್ಲಿ ಮಹಿಳಾ ಪೊಲೀಸ್ ಸಿಬ್ಬಂದಿಯವರು ಅವರುಗಳನ್ನು ಸುರಕ್ಷಿತ ಸ್ಥಳದವರೆಗೆ ಬಿಟ್ಟು ಬರುವಂತೆ ಸೂಚನೆ ನೀಡಲಾಗಿದೆ.

- ಬೆಂಗಳೂರು ನಗರದ ಪೊಲೀಸ್ ಠಾಣಾ ಸರಹದ್ದುಗಳಲ್ಲಿ ಜನಸ್ನೇಹಿ ಬೀಟ್‌ಗಳನ್ನು ಪ್ರಾರಂಭ ಮಾಡಿದ್ದು, ಸದರಿ ಜನಸ್ನೇಹಿ ಬೀಟ್‌ಗಳಲ್ಲಿ ನಾಗರೀಕ ಸಮಿತಿ ಸದಸ್ಯರ, ಶಾಂತಿ ಪಾಲನಾ ಸಮಿತಿ ಸದಸ್ಯರ ಹಾಗೂ ಹಿರಿಯ ನಾಗರೀಕರ ಸಭೆಗಳನ್ನು ಏರ್ಪಡಿಸಲಾಗುತ್ತಿದೆ. ಮತ್ತು ಆ ಸಭೆಗಳಲ್ಲಿ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ರಕ್ಷಣೆಯನ್ನು ನೀಡುವ ವಿಷಯಕ್ಕೆ ಸಂಬಂಧಪಟ್ಟಂತೆ ಸಾರ್ವಜನಿಕರಿಂದ ಪೊಲೀಸರಿಗೆ ಯಾವ ರೀತಿ ಮಾಹಿತಿಯನ್ನು ಒದಗಿಸಬಹುದು ಎಂಬ ಬಗ್ಗೆ ಹಾಗೂ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ಪೊಲೀಸರು ಯಾವ ರೀತಿಯ ರಕ್ಷಣೆಯನ್ನು ನೀಡಲಾಗುವುದು ಎಂಬ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಗುತ್ತಿದೆ. ಇದರಿಂದಾಗಿ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ರಕ್ಷಣೆಯನ್ನು ನೀಡಲು ನೆರವಾಗುತ್ತಿದೆ.

- ಮಹಿಳೆಯರಿಗೆ ಠಾಣೆಯ ಮತ್ತು ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನು ನೀಡಿ, ಯಾರಾದರೂ ಅನುಮಾನಾಸ್ಪದ/ಅಪರಿಚಿತ ವ್ಯಕ್ತಿಗಳು ತಮ್ಮ ಮನೆಯ ಬಳಿ ಕಂಡು ಬಂದಲ್ಲಿ ಠಾಣೆಗೆ ದೂರವಾಣಿ ಕರೆ ಮಾಡಿ ಮಾಹಿತಿ ನೀಡುವಂತೆ ತಿಳುವಳಿಕೆ ನೀಡಲಾಗಿರುತ್ತದೆ.

- ಮಹಿಳೆಯರ ಸುರಕ್ಷತೆಗಾಗಿ 'ಸೇಫ್ಟಿ ಐಲ್ಯಾಂಡ್'ಗಳನ್ನು ಸ್ಥಾಪಿಸಿದ್ದು, ಹಾಗೂ ನೆರವು ಕೇಂದ್ರಗಳನ್ನು ಸ್ಥಾಪಿಸಿದ್ದು ಮಹಿಳೆಯರು ನೀಡುವ ದೂರುಗಳಿಗೆ ಕೂಡಲೇ ಸ್ಪಂದಿಸಲಾಗುತ್ತಿದೆ.
- ಮಹಿಳೆಯರು ಕಾರ್ಯನಿರ್ವಹಿಸುವ ಕಛೇರಿಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಲೈಂಗಿಕ ಅಪರಾಧಗಳಿಗೆ ಒಳಗಾಗುತ್ತಿರುವ ಬಗ್ಗೆ ಅರಿವು ಮೂಡಿಸಿ, ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿರುತ್ತದೆ.
- ಬೆಂಗಳೂರು ನಗರದ ಶಾಲಾ ಕಾಲೇಜುಗಳಲ್ಲಿ ಮೇಲಿಂದ ಮೇಲೆ ಸಭೆಗಳನ್ನು ನಡೆಸಿ, ರ್‍ಯಾಗಿಂಗ್ ಮತ್ತು ಲೈಂಗಿಕ ಕಿರುಕುಳ ಹಾಗೂ ದೌರ್ಜನ್ಯ ನಡೆಯುತ್ತಿರುವ ಬಗ್ಗೆ ಅರಿವು ಮೂಡಿಸಿ, ಅವುಗಳಿಂದ ರಕ್ಷಣೆ ಪಡೆಯಬಹುದಾದ ಮಾರ್ಗಗಳ ಬಗ್ಗೆ ಮಾಹಿತಿ ನೀಡಲಾಗಿರುತ್ತದೆ.
- ಶೋಷಣೆ ಮತ್ತು ದೌರ್ಜನ್ಯಕ್ಕೆ ಒಳಗಾದ ಮಹಿಳೆಯರು ನಿರ್ಭೀತವಾಗಿ ಕಾನೂನು ರಕ್ಷಣೆ ಪಡೆದುಕೊಳ್ಳುವ ಕುರಿತಾಗಿ ಅರಿವು ಮೂಡಿಸಲಾಗಿರುತ್ತದೆ.
- ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರನ್ನು ಸುರಕ್ಷಿತವಾಗಿ ನೋಡಿಕೊಳ್ಳುವ ಸಂಬಂಧ ನಿರ್ಭಯಾ ಯೋಜನೆ ಅಡಿಯಲ್ಲಿ ನಗರದ ಎಲ್ಲೆಡೆ ಸಿ.ಸಿ.ಟಿವಿ ಕ್ಯಾಮರಾಗಳನ್ನು ಅಳವಡಿಸಿದ್ದು, ಸದರಿ ಸಿ.ಸಿ.ಟಿವಿ ಗಳ ಮಾನಿಟರಿಂಗ್ ಮಾಡಲು ನುರಿತ ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸಿ ಸದಾ ಕಣ್ಗಾವಲು ಮಾಡಲಾಗುತ್ತಿದೆ.
- ಅಲ್ಲದೇ, ಬೆಂಗಳೂರು ನಗರದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟಲು ಎಲ್ಲಾ ರೀತಿಯ ತಾಂತ್ರಿಕ ವ್ಯವಸ್ಥೆಗಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ.

ಹೆಚ್‌ಡಿ 52 ಪಿಸಿಕ್ಯೂ 2023

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು